# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 502
ಸದಸ್ಯರ ಹೆಸರು : ಶ್ರೀ ಶಶೀಲ್ ಜಿ.ನಮೋಶಿ
(ಶಿಕ್ಷಕರ ಕ್ಷೇತ್ರ )
ಉತ್ತರಿಸಬೇಕಾದ ದಿನಾಂಕ : 10.07.2023
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
| --- | --- | --- |
| ಅ) | ರಾಜ್ಯದಲ್ಲಿ ಇರುವ ಕರ್ನಾಟಕ ಪಬ್ಲಿಕ್ ಶಾಲೆಗಳ ಸಂಖ್ಯೆ ಎಷ್ಟು; ಮತ್ತು ಈ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು) | ರಾಜ್ಯದಲ್ಲಿ ಇರುವ ಕರ್ನಾಟಕ ಪಬ್ಲಿಕ್ ಶಾಲೆಗಳ ಸಂಖ್ಯೆ: 285<br><br>ಈ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರ ಸಂಖ್ಯೆ: 7276 (ಜಿಲ್ಲಾವಾರು ಪಟ್ಟಿ ಲಗತ್ತಿಸಲಾಗಿದೆ.) |
| ಆ) | ಸರ್ಕಾರವು ಈ ಪಬ್ಲಿಕ್ ಶಾಲೆಗಳನ್ನು ನಿರ್ವಹಣೆ ಮಾಡಿ ಇವುಗಳಿಗೆ ಪ್ರತ್ಯೇಕ ಕಟ್ಟಡಗಳನ್ನೇ ನೀಡಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು; | ಅಸ್ತಿತ್ವದಲ್ಲಿರುವ ಪ್ರಾಥಮಿಕ ಶಾಲೆ, ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳನ್ನು ಒಟ್ಟುಗೂಡಿಸಿ ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಪ್ರಾರಂಭಿಸಲಾಗಿದೆ. ಸದರಿ ಶಾಲೆಗಳ ಅಸ್ತಿತ್ವದಲ್ಲಿರುವ ಕಟ್ಟಡಗಳನ್ನು ಬಳಸಿಕೊಳ್ಳಲಾಗುತ್ತಿದೆ. ಅಗತ್ಯವಿದ್ದಲ್ಲಿ, ಹೆಚ್ಚಿನ ಕಟ್ಟಡಗಳನ್ನು ನಿರ್ಮಾಣ ಮಾಡಲು ಹಂತ ಹಂತವಾಗಿ ಕ್ರಮವಹಿಸಲಾಗಿದೆ. |
| ಇ) | ಈ ಶಾಲೆಗಳಲ್ಲಿ ಬೋಧನೆ ಮಾಡಲು ಶಿಕ್ಷಕರಿಗೆ ಇರಬೇಕಾದ ಅರ್ಹತೆಗಳು ಯಾವುವು; | **ಸಾಮಾನ್ಯ ಶಾಲೆಗಳಿಗೆ ನಿಗದಿ ಪಡಿಸಿದ ವಿದ್ಯಾರ್ಹತೆಗಳು:**<br>ಪ್ರಾಥಮಿಕ ಶಾಲಾ ಶಿಕ್ಷಕರಿಗೆ : ಟಿ.ಸಿ.ಹೆಚ್/ಡಿ.ಎಡ್<br>ಪ್ರೌಢ ಶಾಲಾ ಶಿಕ್ಷಕರಿಗೆ: ಬಿ.ಎ, ಬಿ.ಇ.ಡಿ/ಬಿ.ಎಸ್‌ಸಿ, ಬಿ.ಇಡಿ<br>ಪದವಿ ಪೂರ್ವ ಉಪನ್ಯಾಸಕರಿಗೆ: ಎಂ.ಎ/ಎಂ.ಕಾಂ/ಎಂ.ಎಸ್‌ಸಿ,<br><br>ಸಾಮಾನ್ಯ ಶಾಲೆಗಳಲ್ಲಿ ಪ್ರಾಥಮಿಕ ಶಾಲಾ, ಪ್ರೌಢ ಶಾಲಾ ಶಿಕ್ಷಕರಿಗೆ ಹಾಗೂ ಪದವಿ ಪೂರ್ವ ಕಾಲೇಜು ಉಪನ್ಯಾಸಕರುಗಳಿಗೆ ನಿಗದಿಪಡಿಸಿರುವ ಶೈಕ್ಷಣಿಕ ವಿದ್ಯಾರ್ಹತೆಗಳೇ ಕೆ.ಪಿ.ಎಸ್ ಶಾಲೆಗಳ ಶಿಕ್ಷಕರಿಗೂ ಅನ್ವಯವಾಗುತ್ತದೆ. |
| ಈ) | ಸರ್ಕಾರ ಪಬ್ಲಿಕ್ ಶಾಲೆಗಳನ್ನು ಘೋಷಣೆ ಮಾಡಿದ್ದರೂ, ಇಲ್ಲಿ ಸಾಮಾನ್ಯ ಪ್ರಾಥಮಿಕ ಶಾಲೆಯ ಶಿಕ್ಷಕರನ್ನು ನೇಮಕ ಮಾಡಿರುವುದರಿಂದ ಗುಣಮಟ್ಟ ಶಿಕ್ಷಣದ ಕೊರತೆ ಕಂಡು ಬರುತ್ತಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ; ಈ ಶಾಲೆಗಳಿಗೆ ಆಂಗ್ಲ ಮಾಧ್ಯಮದಲ್ಲಿ ನುರಿತರಾದ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಕೆ.ಪಿ.ಎಸ್ ಶಾಲೆಗಳಿಗೆ ಪ್ರತ್ಯೇಕವಾಗಿ ಶಿಕ್ಷಕರನ್ನು ನೇಮಕಾತಿ ಮಾಡುವ ಪ್ರಕ್ರಿಯೆ ಇರುವುದಿಲ್ಲ.<br>ಸಾಮಾನ್ಯ/ಪ್ರಾಥಮಿಕ/ಪ್ರೌಢಶಾಲಾ ಶಿಕ್ಷಕರನ್ನೇ ಈ ಶಾಲೆಗಳಿಗೆ ವರ್ಗಾವಣೆ/ನಿಯೋಜನೆ ಮೇಲೆ ಭರ್ತಿ ಮಾಡಲಾಗಿದ್ದು, ಬೋಧನೆ ನಡೆಸಲಾಗುತ್ತಿದೆ.<br><br>ಈ ಶಿಕ್ಷಕರಿಗೆ ವೃತ್ತಿಕೌಶಲ್ಯ, ವಿಷಯವಾರು ಬೋಧನಾ ಕೌಶಲ್ಯ, ವೃತ್ತಿ ದಕ್ಷತೆ ಅಭಿವೃದ್ಧಿ ಪಡಿಸುವ ಸಲುವಾಗಿ ವಿಷಯ ಪುನಶ್ಚೇತನ |

| | | |
|---|---|---|
| | | ಹಾಗೂ ವೃತ್ತಿ ಕೌಶಲ್ಯ ತರಬೇತಿಯನ್ನು ನೀಡಲಾಗಿದೆ.<br><br>ಸದರಿ ಶಾಲೆಗಳಿಗೆ 1 ರಿಂದ 5ನೇ ತರಗತಿವರೆಗೆ ಆಂಗ್ಲ ಮಾಧ್ಯಮದಲ್ಲಿ ತರಗತಿ ಬೋಧನೆ ಮಾಡುತ್ತಿದ್ದು, ಈ ಶಿಕ್ಷಕರ ಭೋಧನಾ ಕೌಶಲ್ಯ ಹೆಚ್ಚಿಸಲು ವಿಶೇಷವಾಗಿ EMTIP-1ರಿಂದ EMTIP-4 ತರಬೇತಿ ನೀಡಿ, ಶಿಕ್ಷಕರನ್ನು ಸಬಲೀಕರಣ ಮಾಡಲಾಗಿದೆ.<br><br>2023–24ನೇ ಸಾಲಿಗೆ ಆಂಗ್ಲ ಮಾಧ್ಯಮದಲ್ಲಿ 5ನೇ ತರಗತಿ ಪ್ರಾರಂಭಿಸಲಾಗಿದ್ದು, EMTIP-5ತರಬೇತಿ ನೀಡುವ ಜೊತೆಗೆ ಸೇವಾ ನಿರತ ತರಬೇತಿಗಳು ನೀಡಲಾಗುತ್ತಿದೆ. |

**ಇಪಿ: 57 ಎಂಪಿಇ 2023**

(ಎಸ್.ಮಧು ಬಂಗಾರಪ್ಪ)
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**